## 8. ಸ್ಪೀಕರ್ ಮನವಿಗೆ ಸುಪ್ರೀಂ ತಿರಸ್ಕಾರ

ಸ್ಪೀಕರ್ ನೀಡಿರುವ ಅನರ್ಹತೆ ನೋಟಿಸ್ ಪ್ರಶ್ನಿಸಿ ರಾಜಸ್ಥಾನ ಹೈಕೋರ್ಟ್‌ನಲ್ಲಿ ನಡೆಯುತ್ತಿರುವ ವಿಚಾರಣೆಗೆ ತಡೆ ನೀಡಲು ಸುಪ್ರೀಂಕೋರ್ಟ್ ನಿರಾಕರಿಸಿದೆ. ಇದರಿಂದ ರಾಜಸ್ಥಾನದಲ್ಲಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ವಿರುದ್ಧ ಬಂಡಾಯವೆದ್ದಿರುವ ಸಚಿನ್ ಪೈಲಟ್ ಮತ್ತು ಅವರ 18 ಬೆಂಬಲಿಗ ಶಾಸಕರಿಗೆ ಕಾನೂನು ಹೋರಾಟದಲ್ಲಿ ಮೊದಲ ಹಂತದ ಮುನ್ನಡೆ ಲಭಿಸಿದಂತಾಗಿದೆ.

ಬಂಡಾಯ ಶಾಸಕರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಿಲ್ಲಿಸುವಂತೆ ಹಾಗೂ ಬಂಡಾಯ ಶಾಸಕರ ಮೇಲೆ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಹೊರಡಿಸಿರುವ ಆದೇಶ ರದ್ದುಪಡಿಸುವಂತೆ ರಾಜಸ್ಥಾನ ವಿಧಾನಸಭಾಧ್ಯಕ್ಷ ಸಿ.ಪಿ.ಜೋಶಿ ಸುಪ್ರೀಂ ಮೆಟ್ಟಿಲೇರಿದ್ದರು. ಈ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಅರುಣ್ ಮಿಶ್ರಾ, ಬಿ.ಆರ್.ಗವಾಯ್ ಮತ್ತು ಕೃಷ್ಣ ಮುರಾರಿ, ಹೈಕೋರ್ಟ್ ನೀಡಲಿರುವ ಆದೇಶಕ್ಕೆ ತಡೆ ನೀಡಲು ನಿರಾಕರಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಹೈಕೋರ್ಟ್ ಆದೇಶ ಮಹತ್ವ ಪಡೆದುಕೊಂಡಿದೆ.

ಬಂಡಾಯವೆದ್ದಿರುವ ಶಾಸಕರು ಸಭೆಗೆ ಹಾಜರಾಗಿಲ್ಲ ಹಾಗೂ ಅವರ ಪಕ್ಷದ್ದೇ ಸರ್ಕಾರವನ್ನು ಉರುಳಿಸಲು ಪ್ರಯತ್ನಿಸಿದ್ದಾರೆ ಎಂದು ಸ್ಪೀಕರ್ ಪರ ವಕೀಲರಾದ ಕಪಿಲ್ ಸಿಬಲ್ ಪೀಠಕ್ಕೆ ಮನವರಿಕೆ ಮಾಡಿಕೊಟ್ಟರು. ಈ ಶಾಸಕರು ಬಹುಮತ ಸಾಬೀತುಪಡಿಸಲಿ ಎಂದು ಹೇಳಿಕೆಗಳನ್ನು ನೀಡಿದರು. ಈ ಹಂತದಲ್ಲಿ ಸ್ಪೀಕರ್ ಅನರ್ಹತೆ ನೋಟಿಸ್ ಕುರಿತು ನ್ಯಾಯಾಲಯ ನಿರ್ಧರಿಸಲಾಗದು ಎಂದರು. ಶಾಸಕರು ಸಭೆಗೆ ಬರಲಿಲ್ಲ ಎನ್ನುವುದನ್ನು ಪಕ್ಷ ವಿರೋಧಿ ಚಟುವಟಿಕೆ ಎಂದು ಪರಿಗಣಿಸಲಾಯಿತೇ ಎಂದು ಪೀಠ ಪ್ರಶ್ನಿಸಿತು. ಅಲ್ಲದೆ ಪ್ರಜಾಪ್ರಭುತ್ವದಲ್ಲಿ ಭಿನ್ನಮತವನ್ನು ಅಡಗಿಸಲಾಗದು ಎಂದಿತು. ಈ ಹಿಂದೆ 1992ರಲ್ಲಿ ಇಂಥದ್ದೇ ಪ್ರಕರಣವೊಂದರಲ್ಲಿ ಅನರ್ಹತೆ ಪ್ರಕ್ರಿಯೆಯಲ್ಲಿ ನ್ಯಾಯಾಲಯಗಳು ಮಧ್ಯ ಪ್ರವೇಶಿಸುವಂತಿಲ್ಲ ಎಂದು ಸುಪ್ರೀಂ ಕೋರ್ಟ್ ನೀಡಿದ್ದ ತೀರ್ಪನ್ನು ಪೀಠದ ಗಮನಕ್ಕೆ ಸಿಬಲ್ ತಂದರು.

**ಏಕರೂಪತೆಯಿಲ್ಲದ ಸ್ಪೀಕರ್‌ಗಳ ತೀರ್ಪು**

ದೇಶದಲ್ಲಿ ಇದುವರೆಗೆ 97 ಪ್ರಕರಣಗಳು ಶಾಸಕರ ಅನರ್ಹತೆಗೆ ಸಂಬಂಧಿಸಿದ್ದು, ಇದರಲ್ಲಿ 46 ಪ್ರಕರಣಗಳಲ್ಲಿ 113 ಶಾಸಕರು ತಮ್ಮ ಸ್ಥಾನವನ್ನು ಕಳೆದುಕೊಂಡಿದ್ದಾರೆ. ಸ್ಪೀಕರ್ ತೀರ್ಮಾನವೇ ಅಂತಿಮ ಎಂದು ಸಂಸತ್ತು ಘೋಷಿಸಿದ ಮೇಲೆ ಎಲ್ಲ ವಿಧಾನಸಭೆ ಮತ್ತು ಲೋಕಸಭೆ ಸ್ಪೀಕರ್ ಪ್ರತಿ ತೀರ್ಮಾನವನ್ನು ವಿಭಿನ್ನವಾಗಿ ನೀಡಿದ್ದಾರೆ. ಹಲವು ರಾಜ್ಯಗಳಲ್ಲಿ ಸ್ಪೀಕರ್‌ಗಳು ತಮ್ಮದೇ ಆದ ರೀತಿಯಲ್ಲಿ ಅಧಿಕಾರವನ್ನು ಚಲಾಯಿಸಿದ್ದಾರೆ. 68 ಪ್ರಕರಣಗಳಲ್ಲಿ ಪಕ್ಷಗಳ ವಿಭಜನೆ, 81 ಪ್ರಕರಣಗಳಲ್ಲಿ ಪಕ್ಷಗಳ ವಿಲೀನ ನಡೆದಿದೆ. 20 ವರ್ಷಗಳಿಂದ ಈ ಕಾಯ್ದೆಯ ಚರ್ಚೆ ನಡೆಯುತ್ತಿದ್ದು, ಕರ್ನಾಟಕ, ಗೋವಾ, ಸಿಕ್ಕಿಂ, ಅರುಣಾಚಲ ಪ್ರದೇಶ, ಆಂಧ್ರ ಸೇರಿದಂತೆ ಹಲವು ರಾಜ್ಯಗಳಲ್ಲಿ ಪಕ್ಷಾಂತರದಿಂದ ಸರ್ಕಾರಗಳು ಬದಲಾಗಿವೆ. ಪಕ್ಷಾಂತರ ನಿಷೇಧ ಕಾಯ್ದೆಯಲ್ಲಿ ಸ್ಪೀಕರ್ ಅವರಿಗೆ ವಿವೇಚನಾ ಅಧಿಕಾರ ನೀಡಿರುವುದರಿಂದ ಹಲವು ರಾಜ್ಯಗಳಲ್ಲಿ ಅವರು ವಿಭಿನ್ನ ರೀತಿಯ ತೀಮಾನಗಳನ್ನು ಕೈಗೊಂಡಿದ್ದಾರೆ. ಬಹುತೇಕ ತೀರ್ಮಾನಗಳು ಹೈಕೋರ್ಟ್ ಮತ್ತು ಸುಪ್ರೀಂ ಹೈಕೋರ್ಟ್‌ಗಳಲ್ಲಿ ವಿಮರ್ಶೆಗೆ ಒಳಗಾಗಿವೆ. ಆದರೂ ನ್ಯಾಯಾಲಯಗಳು ಸ್ಪೀಕರ್ ವಿಚಾರಣೆ ಪ್ರಕ್ರಿಯೆಯಲ್ಲಿ ಮಧ್ಯ ಪ್ರವೇಶಿಸಲು ಒಪ್ಪಿಲ್ಲ.

ಆಧಾರ:ಸಂಯುಕ್ತ ಕರ್ನಾಟಕ, ದಿನಾಂಕ:24.07.2020